# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103
ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ:ಖ.ಕೋ:2023-24/ 2135 ದಿನಾಂಕ:13.09.2023.

## ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)

ವಿಷಯ: ಸ್ನಾತಕೋತ್ತರ ಪ್ರಾಣಿಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗಕ್ಕೆ ಅಗತ್ಯವಿರುವ Software for virtual dissection Software ಸರಬರಾಜು ಮಾಡಲು ದರಪಟ್ಟಿಯನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ: 1. ರೂಸಾ ಅನುದಾನದಡಿಯಲ್ಲಿನ ಟೆಂಡರ್‌ನಆರ್ಥಿಕ ಬಿಡ್ಡಿನ ನಡಾವಳಿ ಅನುಮೋದನೆ ದಿನಾಂಕ17.08.2023.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:11.09.2023.(ಕಂಡಿಕೆ-05)

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರನ್ವಯ ಉಲ್ಲೇಖ(2)ರ ಆದೇಶದ ಮೇರೆಗೆ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000ರ ತಿದ್ದುಪಡಿ 4(i)(ii) ರ ನಿಯಮದನ್ವಯ ಸ್ನಾತಕೋತ್ತರ ಪ್ರಾಣಿಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗದ ಪ್ರಯೋಗಾಲಯಕ್ಕೆ ಅಗತ್ಯವಿರುವ ಉಪಕರಣಗಳನ್ನು ಸರಬರಾಜು ಪಡೆಯಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ನೋಂದಾಯಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| Sl. No | Particular | Required liscence | Rate to be quoted per quantity. (Inclu. All taxes) |
|---|---|---|---|
| 01 | Software for virtual dissection – Rat/ mouse | 01 | |

**ಷರತ್ತುಗಳು:**

1. ಮುಚ್ಚಿದ ಲಕೋಟೆಯ ಮೇಲೆ " ತುಮಕೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಪ್ರಾಣಿಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ Software ಗೆ ಸಂಬಂಧಿಸಿದ ದರಪಟ್ಟಿ" ಎಂದು ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103, ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: **22.09.2023.ಅಪರಾಹ್ನ 12.30 ಗಂಟೆ.**
4. ದರಪಟ್ಟಿಯನ್ನು ದಿನಾಂಕ: **22.09.2023 ರಂದು ಅಪರಾಹ್ನ 4.30ಕ್ಕೆ** ತೆರೆಯಲಾಗುವುದು.
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರುತ್ತದೆ.
7. ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
8. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಇತರೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.
9. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
11. ತಂತ್ರಾಂಶವು ಸರಿಯಾಗಿ ಕಾರ್ಯನಿರ್ವಹಿಸದೇ ಇದ್ದಲ್ಲಿ ಯಾವುದೇ ಕಾರಣ ನೀಡದೇ ಹುಂಡಿಯನ್ನು ಅಂಗೀಕರಿಸುವ ಮತ್ತು ತಿರಸ್ಕರಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
12. ಒಂದು ವರ್ಷದ ಅವಧಿಯವರೆಗೆ ತಂತ್ರಾಂಶದಲ್ಲಿ ಏನಾದರೂ ಸಮಸ್ಯೆಗಳು ಕಂಡುಬಂದಲ್ಲಿ ಯಾವುದೇ ಸೇವಾ/ಇತರೆ ಶುಲ್ಕವನ್ನು ವಿಧಿಸದೇ ತಾವೇ ತಮ್ಮ ಸಂಸ್ಥೆಯ ವತಿಯಿಂದ ಸ್ವಂತ ಖರ್ಚಿನಲ್ಲಿ ನಿರ್ವಹಣೆ ಮಾಡಿಕೊಡುವುದು.
13. ತಮ್ಮ ಸಂಸ್ಥೆಯಿಂದ ಸರಬರಾಜು ಮಾಡಲು ಉದ್ದೇಶಿಸಿರುವ ತಂತ್ರಾಂಶದ ಸಂರಚನೆಯಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಯ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
14. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
15. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.

16. ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
17. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

Mangalahoum M

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಮುಖ್ಯಸ್ಥರು, ಸ್ನಾತಕೋತ್ತರ ಪ್ರಾಣಿಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
3. ಕಚೇರಿ ಪ್ರತಿ.